# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಬುಧವಾರ, ೦೮, ಜುಲೈ, ೨೦೨೬ (ಆಷಾಢ, ೧೭, ಶಕವರ್ಷ, ೧೯೪೮)<br>BENGALURU,WEDNESDAY, 08, JULY, 2026 (ASHADHA, 17, SHAKAVARSHA, 1948) | ನಂ. ೫೦೦<br>No. 500 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಜೇಷ್ಠತೆ ಹಾಗೂ ಅರ್ಹತೆಯ ಅಧಾರದ ಮೇಲೆ (on the basis of seniority-cum-merit) ಮುಂಬಡ್ತಿ ನೀಡಲು ರಚಿಸಲಾಗಿರುವ ಇಲಾಖಾ ಮುಂಬಡ್ತಿ ಸಮಿತಿಗಳನ್ನು ಪುನರ್ ರಚಿಸುವ ಕುರಿತು.

**ಓದಲಾಗಿದೆ:**

1. ದಿನಾಂಕ 09.10.1985ರ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 5 ಸ್ಆರ್‌ಸಿ 84.
2. ದಿನಾಂಕ 06.12.1996 ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 64 ಸೇನೆನಿ 96.
3. ದಿನಾಂಕ 19.05.2010ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 75 ಸೇನೆನಿ 2010.
4. ದಿನಾಂಕ 29.08.2011ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೇನೆನಿ 2011.
5. ದಿನಾಂಕ: 06.08.2021ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಸಲುಸೇ 2020

**ಪ್ರಸ್ತಾವನೆ:**

1. ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಜೇಷ್ಠತೆ ಹಾಗೂ ಅರ್ಹತೆಯ ಅಧಾರದ ಮೇಲೆ (on the basis of seniority-cum-merit) ಮುಂಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ, ಮೇಲೆ (1) ರಲ್ಲಿ ಓದಲಾದ ದಿನಾಂಕ 09.10.1985ರ ಅಧಿಕೃತ ಜ್ಞಾಪನದಲ್ಲಿ ವಿವರವಾದ ಮಾರ್ಗಸೂಚನೆಗಳನ್ನು ನೀಡಲಾಗಿರುತ್ತದೆ ಹಾಗೂ ಆ ಅಧಿಕೃತ ಜ್ಞಾಪನದ ಕಂಡಿಕೆ 2, 3, 4, 5 ಮತ್ತು 6 ರಲ್ಲಿ, ಕ್ರಮವಾಗಿ, ಇಲಾಖಾ ಮುಂಬಡ್ತಿ ಸಮಿತಿಗಳ ರಚನೆ, ಸಭೆಗಳನ್ನು ಕಾಲಕಾಲಕ್ಕೆ ನಡೆಸುವ, ಆಯ್ಕೆ ಪಟ್ಟಿಯ ಪ್ರಮಾಣ, ಇಲಾಖಾ ಮುಂಬಡ್ತಿ ಸಮಿತಿಯು ಅನುಸರಿಸಬೇಕಾದ ಕಾರ್ಯವಿಧಾನ ಮತ್ತು ಆಯ್ಕೆ ಪಟ್ಟಿಯನ್ನು ಜಾರಿಗೊಳಿಸುವುದಕ್ಕೆ ಸಂಬಂಧಿಸಿದಂತೆ ಸೂಚನೆಗಳನ್ನು ನೀಡಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ 06.12.1996 ರ ಸರ್ಕಾರದ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಜೇಷ್ಠತೆ ಹಾಗೂ ಅರ್ಹತೆಯ ಅಧಾರದ ಮೇಲೆ ಮುಂಬಡ್ತಿ ನೀಡಲು ಇಲಾಖಾ ಮುಂಬಡ್ತಿ ಸಮಿತಿಗಳನ್ನು ಪುನರ್ ರಚಿಸಲಾಗಿರುತ್ತದೆ.

3. ಮೇಲ (4) ರಲ್ಲಿ ಓದಲಾದ ದಿನಾಂಕ 29.08.2011 ರ ಸರ್ಕಾರದ ಆದೇಶದಲ್ಲಿ ಮೇಲೆ (3) ರಲ್ಲಿ ಓದಲಾದ ದಿನಾಂಕ 19.05.2010 ರ ಸರ್ಕಾರದ ಆದೇಶವನ್ನು ಭಾಗಶ: ಮಾರ್ಪಡಿಸಿ, ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡಕ್ಕೆ ಸೇರಿದ ಅಧಿಕಾರಿಯೊಬ್ಬರನ್ನು ಸದರಿ ಇಲಾಖಾ ಮುಂಬಡ್ತಿ ಸಮಿತಿಗಳ ಸದಸ್ಯರಾಗಿ ನೇಮಿಸುವ ಕುರಿತು ಈ ಕೆಳಗೆ ಉದ್ಧರಿಸಿದಂತೆ ಆದೇಶಿಸಲಾಗಿರುತ್ತದೆ:

> "ದಿನಾಂಕ 19.05.2010 ರ ಸರ್ಕಾರಿ ಆದೇಶವನ್ನು ಭಾಗಶ: ಮಾರ್ಪಡಿಸಿ ಜೇಷ್ಠತೆ ಹಾಗೂ ಅರ್ಹತೆಯ ಆಧಾರದ ಮೇಲೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮುಂಬಡ್ತಿಯನ್ನು ಪರಿಗಣಿಸುವ ಉದ್ದೇಶಕ್ಕಾಗಿ ರಚಿಸಲಾದ ಇಲಾಖಾ ಮುಂಬಡ್ತಿ ಸಮಿತಿಗಳಲ್ಲಿ ಅದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬ ಅಧಿಕಾರಿಯನ್ನು ಸದಸ್ಯರನ್ನಾಗಿ ಸಂಬಂಧಿತ ಇಲಾಖಾ ಮುಖ್ಯಸ್ಥರು ನೇಮಕ ಮಾಡತಕ್ಕದ್ದು. ಅಂತಹ ಅಧಿಕಾರಿಯು, ಯಾವ ಹುದ್ದೆಗೆ ಮುಂಬಡ್ತಿಯನ್ನು ಪರಿಗಣಿಸಲಾಗುತ್ತದೆಯೋ ಆ ಹುದ್ದೆಗೆ ಸಮಾನವಾದ ಹುದ್ದೆಯನ್ನು ಅಥವಾ ಆ ಹುದ್ದೆಗಿಂತ ಮೇಲ್ಮಟ್ಟದ ಹುದ್ದೆಯನ್ನು ಧಾರಣ ಮಾಡಿರಬೇಕು. ಈ ಷರತ್ತನ್ನು ಪೂರೈಸುವ ಅಧಿಕಾರಿಯು ಅದೇ ಇಲಾಖೆಯಲ್ಲಿರದಿದ್ದಲ್ಲಿ, ಈ ಷರತ್ತನ್ನು ಪೂರೈಸುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿಯ ಹೆಸರನ್ನು ಸೂಚಿಸುವಂತೆ ಆಡಳಿತ ಇಲಾಖೆಗಳು ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಅವರನ್ನು ಕೋರತಕ್ಕದ್ದು.
>
> ಇದೇ ವಿಧಾನವನ್ನು ಆಯ್ಕೆ ಮೂಲಕ ಮುಂಬಡ್ತಿ ನೀಡಲು ರಚಿಸಲಾಗಿರುವ ಇಲಾಖಾ ಮುಂಬಡ್ತಿ ಸಮಿತಿಗಳಿಗೂ ಅನ್ವಯಿಸತಕ್ಕದ್ದೆಂದು ಆದೇಶಿಸಿದೆ."

4. ಪರಿಶಿಷ್ಟ ಪಂಗಡಗಳಿಗೆ ಸಂಬಂಧಿಸಿದ ವಿಷಯಗಳನ್ನು ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಸಚಿವಾಲಯದಿಂದ ಬೇರ್ಪಡಿಸಿ, ಪರಿಶಿಷ್ಟ ಪಂಗಡದವರ ಸರ್ವೋತೋಮುಖ ಅಭಿವೃದ್ಧಿಗಾಗಿ ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಒಂದು ಪ್ರತ್ಯೇಕ ಇಲಾಖೆಯಾದ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯನ್ನು, ಮೇಲೆ (5) ರಲ್ಲಿ ಓದಲಾದ ದಿನಾಂಕ 06.08.2021ರ ಸರ್ಕಾರಿ ಆದೇಶದಲ್ಲಿ ಸೃಜಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿಯೊಬ್ಬರನ್ನೂ ಸಹ ಇಲಾಖಾ ಮುಂಬಡ್ತಿ ಸಮಿತಿಗಳಲ್ಲಿ ಸದಸ್ಯರನ್ನಾಗಿ ನೇಮಿಸುವುದು ಸೂಕ್ತವೆಂದು ಸರ್ಕಾರವು ಭಾವಿಸಿದೆ. ಅಲ್ಲದೆ, ಮೇಲೆ (2), (3) ಮತ್ತು (4) ರಲ್ಲಿ ಕ್ರಮವಾಗಿ ಓದಲಾದ ದಿನಾಂಕ 06.12.1996, 19.05.2010, ಮತ್ತು ದಿನಾಂಕ 29.08.2011 ರ ಸರ್ಕಾರದ ಆದೇಶಗಳನ್ನು

ರದ್ದುಪಡಿಸಿ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಜೇಷ್ಠತೆ ಹಾಗೂ ಅರ್ಹತೆಯ ಆಧಾರದ ಮೇಲೆ ಮುಂಬಡ್ತಿಯ ಮೂಲಕ ನೇಮಕ ಮಾಡಲು ಇಲಾಖಾ ಮುಂಬಡ್ತಿ ಸಮಿತಿಗಳ ರಚನೆಗೆ ಸಂಬಂಧಿಸಿದಂತೆ ಒಂದು ವ್ಯಾಪಕ / ಕ್ರೋಢೀಕೃತವಾದ ಆದೇಶವನ್ನು ಹೊರಡಿಸುವುದು ಸೂಕ್ತವೆಂದು ಸರ್ಕಾರವು ಭಾವಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 373 ಸೇನೆನಿ 2024, ಬೆಂಗಳೂರು, ದಿನಾಂಕ:08.07.2026</u>**

5. ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಹಿನ್ನೆಲೆಯಲ್ಲಿ, ಮೇಲೆ (1)ರಲ್ಲಿ ಓದಲಾದ ದಿನಾಂಕ:09.10.1985ರ ಅಧಿಕೃತ ಜ್ಞಾಪನದ ಕಂಡಿಕೆ 2ನ್ನು ಮತ್ತು ಮೇಲೆ (2), (3) ಮತ್ತು (4) ರಲ್ಲಿ ಕ್ರಮವಾಗಿ ಓದಲಾದ ದಿನಾಂಕ 06.12.1996, 19.05.2010, ಮತ್ತು ದಿನಾಂಕ 29.08.2011 ರ ಸರ್ಕಾರದ ಆದೇಶಗಳನ್ನು ರದ್ದುಪಡಿಸುತ್ತಾ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಜೇಷ್ಠತೆ ಹಾಗೂ ಅರ್ಹತೆಯ ಆಧಾರದ ಮೇಲೆ ಮುಂಬಡ್ತಿಯ ಮೂಲಕ ನೇಮಕ ಮಾಡಲು ಮುಂಬಡ್ತಿ ಪರಿಗಣನಾ ವಲಯ (zone of consideration for promotion) ದಲ್ಲಿರುವ ಸರ್ಕಾರಿ ನೌಕರರ ಅರ್ಹತೆ ಮತ್ತು ಸೂಕ್ತತೆ (eligibility and suitability) ಯನ್ನು ನಿರ್ಧರಿಸಿ, ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಕ್ಕೆ ತನ್ನ ಶಿಫಾರಸ್ಸುಗಳನ್ನು ನೀಡಲು ಈ ಕೆಳಕಂಡಂತೆ ಇಲಾಖಾ ಮುಂಬಡ್ತಿ ಸಮಿತಿಗಳನ್ನು ರಚಿಸಲಾಗಿದೆ:

**(1) <u>ಕರ್ನಾಟಕ ಆಡಳಿತ ಸೇವೆಯ ಹಿರಿಯ ಶ್ರೇಣಿಯ ವೃಂದದ ವೇತನ ಶ್ರೇಣಿಗೆ ಸಮನಾದ ಮತ್ತು ಅದಕ್ಕಿಂತ ಹೆಚ್ಚಿನ ವೇತನ ಶ್ರೇಣಿಯನ್ನು ಹೊಂದಿರುವ ಗ್ರೂಪ್-ಎ ವೃಂದಗಳ ಹುದ್ದೆಗಳಿಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿ:</u>**

| | |
|---|---|
| 1. ಸಂಬಂಧಿಸಿದ ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರು. | ಅಧ್ಯಕ್ಷರು |
| 2. ಸಂಬಂಧಿಸಿದ ಇಲಾಖಾ ಮುಖ್ಯಸ್ಥರು. | ಸದಸ್ಯರು |
| 3. ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯಲ್ಲಿನ ಉಪ ಕಾರ್ಯದರ್ಶಿ ದರ್ಜೆಯ ಹುದ್ದೆಗಿಂತ ಕಡಿಮೆ ಇಲ್ಲದಿರುವ ಹುದ್ದೆಯನ್ನು ಹೊಂದಿರುವ ಅಧಿಕಾರಿ. | ಸದಸ್ಯರು |
| 4. ಪರಿಶಿಷ್ಟ ಜಾತಿಗೆ ಸೇರಿದ ಅಧಿಕಾರಿ. | ಸದಸ್ಯರು |
| 5. ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ. | ಸದಸ್ಯರು |
| 6. ಸಮಿತಿಯ ಅಧ್ಯಕ್ಷರು ನಿರ್ಧರಿಸುವ ಅಧಿಕಾರಿ. | ಸದಸ್ಯ ಕಾರ್ಯದರ್ಶಿ |

**(2) <u>ತಹಸಿಲ್ದಾರ್ ಗ್ರೇಡ್-2 ವೃಂದ ಮತ್ತು ಗ್ರೂಪ್ – ಎ ವೇತನ ಶ್ರೇಣಿಯ ಕನಿಷ್ಠ ವೇತನ ಶ್ರೇಣಿಯನ್ನು, ಆದರೆ, ಕರ್ನಾಟಕ ಆಡಳಿತ ಸೇವೆಯ ಹಿರಿಯ ಶ್ರೇಣಿಯ ವೃಂದದ ವೇತನ ಶ್ರೇಣಿಗಿಂತ ಕಡಿಮೆ ವೇತನ ಶ್ರೇಣಿಯನ್ನು ಹೊಂದಿರುವ ಗ್ರೂಪ್-ಎ ವೃಂದಗಳ ಹುದ್ದೆಗಳಿಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿ:</u>**

| | |
|---|---|
| 1. ಸಂಬಂಧಿಸಿದ ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರು. | ಅಧ್ಯಕ್ಷರು |
| 2. ಸಂಬಂಧಿಸಿದ ಇಲಾಖಾ ಮುಖ್ಯಸ್ಥರು. | ಸದಸ್ಯರು |
| 3. ಸಮಿತಿಯ ಅಧ್ಯಕ್ಷರು ಸೂಚಿಸುವ, ಸಂಬಂಧಪಟ್ಟ ಆಡಳಿತ ಇಲಾಖೆಯಲ್ಲಿ ಸೇವಾ ವಿಷಯಗಳನ್ನು ನಿರ್ವಹಿಸುವ ಅಧೀನ ಕಾರ್ಯದರ್ಶಿ ಹುದ್ದೆಗೆ ಕಡಿಮೆ ಇಲ್ಲದಂತಹ ಅಧಿಕಾರಿ | ಸದಸ್ಯರು |
| 4. ಪರಿಶಿಷ್ಟ ಜಾತಿಗೆ ಸೇರಿದ ಅಧಿಕಾರಿ. | ಸದಸ್ಯರು |
| 5. ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ. | ಸದಸ್ಯರು |
| 6. ಸಮಿತಿಯ ಅಧ್ಯಕ್ಷರು ನಿರ್ಧರಿಸುವ ಅಧಿಕಾರಿ. | ಸದಸ್ಯ ಕಾರ್ಯದರ್ಶಿ |

**(3) <u>ತಹಸಿಲ್ದಾರ್ ಗ್ರೇಡ್-2 ವೃಂದವನ್ನು ಹೊರತುಪಡಿಸಿ, ಗ್ರೂಪ್- "ಬಿ" ಗೆ ಸೇರಿದ ವೇತನ ಶ್ರೇಣಿಯನ್ನು ಹೊಂದಿರುವ ಹುದ್ದೆಗಳಿಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿ:</u>**

| | |
|---|---|
| 1. ಸಂಬಂಧಿಸಿದ ಇಲಾಖಾ ಮುಖ್ಯಸ್ಥರು. | ಅಧ್ಯಕ್ಷರು |
| 2. ಸಮಿತಿಯ ಅಧ್ಯಕ್ಷರು ಸೂಚಿಸುವ ಅದೇ ಇಲಾಖೆಯ ಅಧಿಕಾರಿ. | ಸದಸ್ಯರು |
| 3. ಸಮಿತಿಯ ಅಧ್ಯಕ್ಷರು ಸೂಚಿಸುವ, ಅದೇ ಇಲಾಖೆಯಲ್ಲಿ ಸೇವಾ ವಿಷಯಗಳನ್ನು ನಿರ್ವಹಿಸುವ ಅಧಿಕಾರಿ. | ಸದಸ್ಯರು |
| 4. ಪರಿಶಿಷ್ಟ ಜಾತಿಗೆ ಸೇರಿದ ಅಧಿಕಾರಿ. | ಸದಸ್ಯರು |
| 5. ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ. | ಸದಸ್ಯರು |
| 6. ಸಮಿತಿಯ ಅಧ್ಯಕ್ಷರು ನಿರ್ಧರಿಸುವ ಅಧಿಕಾರಿ. | ಸದಸ್ಯ ಕಾರ್ಯದರ್ಶಿ |

**ಟಿಪ್ಪಣಿ-1:** ಆಯಾಯ ಇಲಾಖೆಯಲ್ಲಿನ ಕನಿಷ್ಟ ಮಟ್ಟದ ಗ್ರೂಪ್-ಎ ವೃಂದದ ಹುದ್ದೆಯವರೆಗೆ (upto and inclusive of the lowest category of Group-A post in the department) ಮಾತ್ರ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನೌಕರರಿಗೆ ಮುಂಬಡ್ತಿ ಮೀಸಲಾತಿ ಅನ್ವಯವಾಗುತ್ತದೆ. ಆದಕಾರಣ, ಈ ಅಂಶವನ್ನು ಗಣನೆಗೆ ತೆಗೆದುಕೊಂಡು ಇಲಾಖಾ ಮುಂಬಡ್ತಿ ಸಭೆಗೆ ಪರಿಶಿಷ್ಟ ಜಾತಿ:

ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿಗಳನ್ನು ಆಹ್ವಾನಿಸುವ ಬಗ್ಗೆ ಇಲಾಖೆಗಳು ಸೂಕ್ತ ನಿರ್ಧಾರ ತೆಗೆದುಕೊಳ್ಳುವುದು.

**ಟಿಪ್ಪಣಿ-2:** ಯಾವ ಇಲಾಖೆಗಾಗಿ ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಲಾಗಿದೆಯೋ, ಅದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬೊಬ್ಬ ಅಧಿಕಾರಿಯವರನ್ನು ಸದಸ್ಯರನ್ನಾಗಿ ಸಂಬಂಧಿತ ಸಮಿತಿಯ ಅಧ್ಯಕ್ಷರು ನಾಮನಿರ್ದೇಶನ ಮಾಡುವುದು. ಯಾವ ಹುದ್ದೆಗೆ ಮುಂಬಡ್ತಿಯನ್ನು ಪರಿಗಣಿಸಲಾಗುತ್ತದೆಯೋ, ಆ ಹುದ್ದೆಗೆ ಸಮಾನವಾದ ಹುದ್ದೆಯನ್ನು ಅಥವಾ ಆ ಹುದ್ದೆಗಿಂತ ಮೇಲ್ಮಟ್ಟದ ಹುದ್ದೆಯನ್ನು ಧಾರಣ ಮಾಡಿರುವ ಅಧಿಕಾರಿಯನ್ನು ನಾಮ ನಿರ್ದೇಶನ ಮಾಡುವುದು. ಅಂತಹ ಸಮಾನವಾದ ಹುದ್ದೆಯನ್ನು ಅಥವಾ ಮೇಲ್ಮಟ್ಟದ ಹುದ್ದೆಯನ್ನು ಧಾರಣ ಮಾಡಿರುವ ಅಧಿಕಾರಿಗಳು ಅದೇ ಇಲಾಖೆಯಲ್ಲಿ ಲಭ್ಯವಿಲ್ಲದೇ ಇದ್ದಲ್ಲಿ, ಈ ಕೆಳಕಂಡಂತೆ ಕ್ರಮ ತೆಗೆದುಕೊಳ್ಳತಕ್ಕದ್ದು:

(ಅ) ಅಂತಹ ಸಮಾನವಾದ ಹುದ್ದೆಯನ್ನು ಅಥವಾ ಮೇಲ್ಮಟ್ಟದ ಹುದ್ದೆಯನ್ನು ಧಾರಣ ಮಾಡಿರುವ ಪರಿಶಿಷ್ಟ ಜಾತಿಗೆ ಸೇರಿದ ಅಧಿಕಾರಿಯ ಹೆಸರನ್ನು ಸೂಚಿಸುವಂತೆ ಸಂಬಂಧಪಟ್ಟ ಇಲಾಖೆಯು, ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರನ್ನು ಕೋರತಕ್ಕದ್ದು.

(ಆ) ಅಂತಹ ಸಮಾನವಾದ ಹುದ್ದೆಯನ್ನು ಅಥವಾ ಮೇಲ್ಮಟ್ಟದ ಹುದ್ದೆಯನ್ನು ಧಾರಣ ಮಾಡಿರುವ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿಯ ಹೆಸರನ್ನು ಸೂಚಿಸುವಂತೆ ಸಂಬಂಧಪಟ್ಟ ಇಲಾಖೆಯು, ಸರ್ಕಾರದ ಕಾರ್ಯದರ್ಶಿ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಇವರನ್ನು ಕೋರತಕ್ಕದ್ದು.

**ಟಿಪ್ಪಣಿ-3:** ಲೋಕೋಪಯೋಗಿ ಇಲಾಖೆ ಮತ್ತು ಜಲಸಂಪನ್ಮೂಲ ಇಲಾಖೆಗಳಿಗೆ ಸಂಬಂಧಪಟ್ಟ ಇಲಾಖಾ ಮುಂಬಡ್ತಿ ಸಮಿತಿಗಳಲ್ಲಿ ಮುಖ್ಯ ಅಭಿಯಂತರರು [ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ (WRDO)] ರವರು ಸದಸ್ಯರಾಗಿರತಕ್ಕದ್ದು.

6. ಸರ್ಕಾರಿ ನೌಕರರನ್ನು ಮುಂಬಡ್ತಿಗೆ ಪರಿಗಣಿಸುವಾಗ ಅವರುಗಳ ಅರ್ಹತೆ ಮತ್ತು ಸೂಕ್ತತೆಯನ್ನು ನಿರ್ಧರಿಸಲು ಮೇಲೆ (1) ರಲ್ಲಿ ಓದಲಾದ ದಿನಾಂಕ 09.10.1985 ರ ಅಧಿಕೃತ ಜ್ಞಾಪನದಲ್ಲಿ ನೀಡಲಾದ ಮಾರ್ಗಸೂಚಿಗಳು ಮತ್ತು ಈ ಸಂಬಂಧವಾಗಿ ಕಾಲಕಾಲಕ್ಕೆ ನೀಡಲಾದ / ನೀಡಲಾಗುವ ಮಾರ್ಗಸೂಚಿಗಳನ್ನು ಇಲಾಖಾ ಮುಂಬಡ್ತಿ ಸಮಿತಿಗಳು ಹಾಗೂ ನೇಮಕಾತಿ ಪ್ರಾಧಿಕಾರಗಳು ಅನುಸರಿಸತಕ್ಕದ್ದು.

7. ಕರ್ನಾಟಕ ಸರ್ಕಾರ ಸಚಿವಾಲಯದ ಸೇವೆಗೆ ಸೇರಿದ ಸರ್ಕಾರದ ಜಂಟಿ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಮತ್ತು ಅಧೀನ ಕಾರ್ಯದರ್ಶಿ ಹುದ್ದೆಗಳಿಗೆ ಸಂಬಂಧಿಸಿದಂತೆ ದಿನಾಂಕ 25.01.1993

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ರ ಆದೇಶ ಸಂಖ್ಯೆ ಸಿಆಸುಇ 26 ಸಆಸೇ 93 ರಲ್ಲಿ ರಚಿಸಲಾದ ಮತ್ತು ಸರ್ಕಾರದ ಅಪರ ಕಾರ್ಯದರ್ಶಿ ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ದಿನಾಂಕ 27.02.1998 ರ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 59 ಸಅಸೇ 98 ರಲ್ಲಿ ರಚಿಸಲಾದ ಇಲಾಖಾ ಮುಂಬಡ್ತಿ ಸಮಿತಿಗಳು ಯಥಾವತ್ತಾಗಿ ಮುಂದುವರೆಯುತ್ತವೆ.

8. ಆಯ್ಕೆ ಮೂಲಕ ಮುಂಬಡ್ತಿ ನೀಡುವ ವಿಧಾನವನ್ನು ಅನುಸರಿಸಿ ಅಧಿಕಾರಿಗಳ ಅರ್ಹತೆ ಮತ್ತು ಸೂಕ್ತತೆಯನ್ನು ಪರಿಶೀಲಿಸಿ ನೇಮಕಾತಿ ಪ್ರಾಧಿಕಾರಕ್ಕೆ ಸೂಕ್ತ ಶಿಫಾರಸ್ಸು ಮಾಡಲು ದಿನಾಂಕ 23.12.1996 ರ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 70 ಸೆನೆನಿ 96 ರಲ್ಲಿ ರಚಿಸಲಾದ ಆಯ್ಕೆ ಸಮಿತಿಯಲ್ಲಿ, ಪರಿಶಿಷ್ಟ ಜಾತಿಗೆ ಸೇರಿದ ಒಬ್ಬ ಅಧಿಕಾರಿಯನ್ನು ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬ ಅಧಿಕಾರಿಯನ್ನು ಆಯ್ಕೆ ಸಮಿತಿಯ ಸದಸ್ಯರನ್ನಾಗಿ ಆಯ್ಕೆ ಸಮಿತಿಯ ಅಧ್ಯಕ್ಷರು ನಾಮನಿರ್ದೇಶಿಸಬಹುದಾಗಿದೆ. ಆಯ್ಕೆ ಸಮಿತಿಯ ಅಧ್ಯಕ್ಷರು ಮೇಲ್ಕಂಡಂತೆ ನಾಮನಿರ್ದೇಶಿಸಬಹುದಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿಗಳು, ಮುಂಬಡ್ತಿಯನ್ನು ನೀಡಲು ಪರಿಗಣಿಸಲಾಗುತ್ತಿರುವ ಹುದ್ದೆಗೆ ಸಮಾನವಾದ ಹುದ್ದೆಯನ್ನು / ಇಲಾಖಾ ಮುಖ್ಯಸ್ಥರ ಹುದ್ದೆಯನ್ನು ಧಾರಣಮಾಡಿರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆಶಾಕುಮಾರಿ. ಎ.ಜೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು)

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು